# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ -145ರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಹೊಂಬೇಗೌಡನಗರ ವಾರ್ಡ್ 177(145) ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯವರಾದ ಶ್ರೀ. ಮಹಾಂತೇಶ್ ಬುರನಾಪುರ ಕಾರ್ಯಪಾಲಕ ಅಭಿಯಂತರರು (ಯೋಜನೆ-ದಕ್ಷಿಣ) ಮತ್ತು ನೋಡಲ್ ಅಧಿಕಾರಿ ಅಪ್ಪಣೆ ಮೇರೆಗೆ ದಿನಾಂಕ:15/10/2022ರ ಶನಿವಾರದಂದು ಮಧ್ಯಾಹ್ನ 3.00 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ವ್ಯಾಪ್ತಿಯಲ್ಲಿನ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸದಸ್ಯರಿಗೆ ಆಹ್ವಾನ ನೀಡಿದ್ದು, ಸಭೆಗೆ ಹಾಜರಾಗಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ವಾರ್ಡ್ ಸಮಿತಿ ಸಭೆಯ ಅಧ್ಯಕ್ಷರ ಅಧ್ಯಕ್ಷತೆಯೊಂದಿಗೆ ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:-**

1. ಶ್ರೀ. ಮಹಾಂತೇಶ್ ಬುರನಾಪುರ ಕಾರ್ಯಪಾಲಕ ಅಭಿಯಂತರರು (ಯೋಜನೆ-ದಕ್ಷಿಣ) ಮತ್ತು ನೋಡಲ್ ಅಧಿಕಾರಿ.
2. ಶ್ರೀ. ವಿಜಯಕುಮಾರ್ ಕೆ.ಎಸ್. ಸಹಾಯಕ ಅಭಿಯಂತರರು ವಾರ್ಡ್-177.
3. ಶ್ರೀ. ಆರ್. ಉಮಾಶಂಕರ್, ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್-177.
4. ಶ್ರೀ. ದೇವವರ್ಮ, ಕೆಲಸ ಪರಿವೀಕ್ಷಕರು ವಾರ್ಡ್ 177(145)
5. ಕುಮಾರಿ. ರುಚಿತಾ, ಸಹಾಯಕ ಅಭಿಯಂತರರು (ಹೊರಗುತ್ತಿಗೆ) ವಾರ್ಡ್ 177(145)
6. ವಾರ್ಡಿನ ಸುಚಿಮಿತ್ರ ರವರು.
7. ವಾರ್ಡಿನ ಸ್ಥಳೀಯರಾದ ಶ್ರೀ. ಪದ್ಮನಾಭ ಕೆ.ಆರ್.
8. ವಾರ್ಡಿನ ಸ್ಥಳೀಯರಾದ ಶ್ರೀ. ಪಿ. ದಯಾನಂದ.
9. ವಾರ್ಡಿನ ಸ್ಥಳೀಯರಾದ ಶ್ರೀ. ಸಂದೀಪ್.
10. ವಾರ್ಡಿನ ಸ್ಥಳೀಯರಾದ ಶ್ರೀ. ಕಿಶೋರ್ ಎಸ್.
11. ವಾರ್ಡಿನ ಸ್ಥಳೀಯರಾದ ಶ್ರೀಮತಿ. ಜ್ಯೋತಿ ಸಚ್ಚಿದಾನಂದ.
12. ವಾರ್ಡಿನ ಸ್ಥಳೀಯರಾದ ಹೆಚ್. ಪ್ರಭಾಕರ.

**ಸಭೆಗೆ ಗೈರು ಹಾಜರಾದ ಇಲಾಖೆಗಳು:-**

1. ಪೋಲೀಸ್ ಇಲಾಖೆ ಅಧಿಕಾರಿಗಳು ಕಾನೂನು ಸುವ್ಯವಸ್ಥೆ ಆಡುಗೋಡಿ.
2. ವಿಲ್ಸನ್‌ಗಾರ್ಡನ್ ಪೋಲೀಸ್ ಠಾಣೆ ಕಾನೂನು ಸುವ್ಯವಸ್ಥೆ & ಸಂಚಾರ ವಾರ್ಡ್ 177.
3. ಸಹಾಯಕ ಇಂಜಿನಿಯರ್ (ಬೆಸ್ಕಾಂ).



Scanned with CamScanner

4. ಅರಣ್ಯ ಇಲಾಖೆಯ ಅಧಿಕಾರಿಗಳು.
5. ತೋಟಗಾರಿಕೆ ಇಲಾಖೆ, ಮೇಲ್ವಿಚಾರಕರು ವಾರ್ಡ್ 177.
6. ಸಹಾಯಕ ಇಂಜಿನಿಯರ್ (BWSSB).
7. ಸ.ಕಾ.ನಿ. ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯ, ಬಿಬಿಎಂಪಿ ಕೇಂದ್ರ ಕಛೇರಿ.
8. ಸ.ಕಾ.ನಿ. ಅಭಿಯಂತರರು, ಯೋಜನೆ–ಕೇಂದ್ರ, ಬಿಬಿಎಂಪಿ ಕೇಂದ್ರ ಕಛೇರಿ.
9. ಸ.ಕಾ.ನಿ. ಅಭಿಯಂತರರು, ಬೃಹತ್ ನೀರುಗಾಲುವೆ ಬಿಬಿಎಂಪಿ ಜಯನಗರ ವಾಣಿಜ್ಯ ಸಂಕೀರ್ಣ ಕಟ್ಟಡ.
10. ಸಹಾಯಕ ನಿರ್ದೇಶಕರು, ಪಶು ಸಂಗೋಪನಾ ಇಲಾಖೆ, ದಾಸಪ್ಪ ಆಸ್ಪತ್ರೆ, ಬಿಬಿಎಂಪಿ. ಬೆಂಗಳೂರು.

1. ವಾರ್ಡಿನ ಸ್ಥಳೀಯರು ಮಾತನಾಡಿ ವಿಲ್ಸನ್‌ಗಾರ್ಡನ್‌ನ 10ನೇ ಅಡ್ಡರಸ್ತೆಯಲ್ಲಿರುವ ರಸ್ತೆಗುಂಡಿಗಳನ್ನು ಮುಚ್ಚುವಂತೆ ಸಭೆಯಲ್ಲಿ ತಿಳಿಸಿರುತ್ತಾರೆ.
2. ವಾರ್ಡಿನ ಸ್ಥಳೀಯರು ಮಾತನಾಡಿ ವಿಲ್ಸನ್‌ಗಾರ್ಡನ್‌ನ 10ನೇ ಅಡ್ಡರಸ್ತೆಯಲ್ಲಿ ಸರ್ವೀಸ್ ರಸ್ತೆ ಹಾಗೂ ಕ್ಯಾರೇಜ್ ವೇ ರಸ್ತೆ ಸೇರುವ ರಸ್ತೆಯ ಅಳತೆಯ ಬಗ್ಗೆ ಸಭೆಯಲ್ಲಿ ತಿಳಿಸಿರುತ್ತಾರೆ.
3. ವಾರ್ಡಿನ ಸ್ಥಳೀಯರು ಮಾತನಾಡಿ ಜೈನ್ ಟೆಂಪಲ್ ಹತ್ತಿರ ಇರುವ 7ನೇ ಅಡ್ಡರಸ್ತೆಯ ಚರಂಡಿಯು ಹಾಳಾಗಿರುವ ಬಗ್ಗೆ ಸಭೆಯಲ್ಲಿ ತಿಳಿಸಿರುತ್ತಾರೆ.
4. ವಾರ್ಡಿನ ಸ್ಥಳೀಯರು ಮಾತನಾಡಿ ವಿಲ್ಸನ್‌ಗಾರ್ಡನ್ 13ನೇ ಅಡ್ಡರಸ್ತೆಯ ಮ್ಯಾನ್‌ಹೋಲ್ ಎತ್ತರಿಸುವ ಬಗ್ಗೆ ಸಭೆಯಲ್ಲಿ ತಿಳಿಸಿರುತ್ತಾರೆ.
5. ವಾರ್ಡಿನ ಸ್ಥಳೀಯರು ಮಾತನಾಡಿ ವಿಲ್ಸನ್‌ಗಾರ್ಡನ್ 5ನೇ ಅಡ್ಡರಸ್ತೆ, ಹೆಚ್. ಸಿದ್ದಯ್ಯ ರಸ್ತೆ (ಪಿ.ಹೆಚ್.ಸಿ ಗೇಟ್) ರಸ್ತೆಯನ್ನು ಸ್ವಚ್ಛಗೊಳಿಸುವ ಬಗ್ಗೆ ಸಭೆಯಲ್ಲಿ ತಿಳಿಸಿರುತ್ತಾರೆ.
6. ವಾರ್ಡಿನ ಸ್ಥಳೀಯರು ಮಾತನಾಡಿ ಚಿನ್ನಯ್ಯನಪಾಳ್ಯ 6ನೇ ಮುಖ್ಯರಸ್ತೆಯಲ್ಲಿರುವ ಹರಿಲಕ್ಷ್ಮಿ ಥಿಯೇಟರ್ ಹತ್ತಿರ ಚರಂಡಿಯ ಸುಸ್ಥಿತಿಯ ಬಗ್ಗೆ ಸಭೆಯಲ್ಲಿ ತಿಳಿಸಿರುತ್ತಾರೆ.
7. ವಾರ್ಡಿನ ಸ್ಥಳೀಯರು ಮಾತನಾಡಿ ವಿಲ್ಸನ್‌ಗಾರ್ಡನ್ 4ನೇ ಮತ್ತು 5ನೇ ಅಡ್ಡರಸ್ತೆಯ ಮಧ್ಯದಲ್ಲಿರುವ X-Ray Center ಹತ್ತಿರ ಗಾರ್ಬೇಜ್‌ನ್ನು ತೆರವುಗೊಳೀಸಲು ಸಭೆಯಲ್ಲಿ ತಿಳಿಸಿರುತ್ತಾರೆ.



Scanned with CamScanner

8. ವಾರ್ಡಿನ ಸ್ಥಳೀಯರು ಮಾತನಾಡಿ ಸಿದ್ಧಾಪುರ 144 ವಾರ್ಡ್ ಕಛೇರಿ ಹತ್ತಿರ ಪಾದಚಾರಿ ಮಾರ್ಗದಲ್ಲಿ ಕಾಂಕ್ರಿಟ್ ಉಬ್ಬಿದ್ದು, ಸರಿಪಡಿಸುವ ಬಗ್ಗೆ ಸಭೆಯಲ್ಲಿ ತಿಳಿಸಿರುತ್ತಾರೆ.

9. ವಾರ್ಡಿನ ಸ್ಥಳೀಯರು ಮಾತನಾಡಿ ವಿಲ್ಸನ್‌ಗಾರ್ಡನ್ ಪೊಲೀಸ್ ಠಾಣೆ ಹತ್ತಿರ ರಸ್ತೆ ಗುಂಡಿಗಳನ್ನು ಮುಚ್ಚಲು ಸಭೆಯಲ್ಲಿ ತಿಳಿಸಿರುತ್ತಾರೆ.

10. ವಾರ್ಡಿನ ಸ್ಥಳೀಯರು ಮಾತನಾಡಿ ವಿಲ್ಸನ್‌ಗಾರ್ಡನ್ ಪ್ರದೇಶದಲ್ಲಿ ಸಿ.ಸಿ. ಟಿ.ವಿ ಅಳವಡಿಸುವ ಬಗ್ಗೆ ಸಭೆಯಲ್ಲಿ ತಿಳಿಸಿರುತ್ತಾರೆ.

11. ವಾರ್ಡಿನ ಸ್ಥಳೀಯರು ಮಾತನಾಡಿ ವಿಲ್ಸನ್‌ಗಾರ್ಡನ್ ಪೊಲೀಸ್ ಠಾಣೆ ಹತ್ತಿರ ಮತ್ತು 6ನೇ ಅಡ್ಡರಸ್ತೆಯಲ್ಲಿ ನಾಯಿಗಳ ತೊಂದರೆ ನಿವಾರಿಸುವ ಬಗ್ಗೆ ಸಭೆಯಲ್ಲಿ ತಿಳಿಸಿರುತ್ತಾರೆ.

12. ವಾರ್ಡಿನ ಸ್ಥಳೀಯರು ಮಾತನಾಡಿ 5ನೇ ಅಡ್ಡರಸ್ತೆಯಲ್ಲಿ ನೀರು ಸರಬರಾಜಿನಲ್ಲಿ ಉಂಟಾಗಿರುವ ತೊಂದರೆಯ ಬಗ್ಗೆ ಸಭೆಯಲ್ಲಿ ತಿಳಿಸಿರುತ್ತಾರೆ.

13. ವಾರ್ಡಿನ ಸ್ಥಳೀಯರು ಮಾತನಾಡಿ ವಿಲ್ಸನ್‌ಗಾರ್ಡನ್ ವ್ಯಾಪ್ತಿಯ 8ನೇ ಅಡ್ಡರಸ್ತೆಯಲ್ಲಿ ಹೂವಿನ ಅಂಗಡಿಯಿಂದ ಹೆಚ್ಚಿನ ಘನತ್ಯಾಜ್ಯ ಉತ್ಪತ್ತಿಯಾಗುತ್ತಿರುವುದನ್ನು ತೆರವುಗೊಳಿಸುವ ಬಗ್ಗೆ ಸಭೆಯಲ್ಲಿ ತಿಳಿಸಿರುತ್ತಾರೆ.

ಮೇಲಿನ ಈ ಎಲ್ಲಾ ಚಟುವಟಿಕೆಗಳನ್ನು ಕ್ರಮಬದ್ಧವಾಗಿ ಸಂಬಂಧಪಟ್ಟ ಇಲಾಖಾವಾರು ಸಮನ್ವಯ ಸಾಧಿಸಿಕೊಂಡು ನಿರ್ವಹಿಸಲು ಎಲ್ಲಾ ಸಿಬ್ಬಂಧಿ ವರ್ಗದವರು ಒಂದುಗೂಡಿ ಈ ಕಾರ್ಯದಲ್ಲಿ ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ಧಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ಹೇಳುತ್ತಾ ಸಭೆ ಮುಕ್ತಾಯಗೊಳಿಸಿದರು.

ಕಾರ್ಯದರ್ಶಿ & ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ – 177(145)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು & ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ – 177(145)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ



Scanned with CamScanner